ದೂದ್‌ಗಂಗಾ ನದಿಗೆ ಅಡ್ಡಲಾಗಿ ಸೇತುವೆ

485 - ಶ್ರೀ ಪ್ರಕಾಶ್ ಬಿ. ಹುಕ್ಕೇರಿ (ಸದಲಗಾ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ನಬಾರ್ಡ್ ಯೋಜನೆಯಲ್ಲಿ ದೂದ್‌ಗಂಗಾ ನದಿಗೆ ಕಟ್ಟಲಾಗುತ್ತಿರುವ ಕಾಮಗಾರಿಗಳನ್ನು ಗುತ್ತಿಗೆದಾರರು ಮಂದಗತಿಯಿಂದ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಸರ್ಕಾರ ಅದರ ಬಗ್ಗೆ ತೆಗೆದುಕೊಂಡ ಕ್ರಮಗಳೇನು?*

ಇ) *ನಬಾರ್ಡ್ ಯೋಜನೆಯ ಪ್ರಕಾರ ಸದರಿ ಬ್ರೀಜ್‌ನ್ನು 18 ತಿಂಗಳಲ್ಲಿ ಪೂರ್ತಿಗೊಳಿಸಲಾಗುವುದೆ?*

ಈ) *ಪೂರ್ತಿಗೊಳ್ಳದೇ ಇದ್ದಲ್ಲಿ ಸರ್ಕಾರದ ಮುಂದಿನ ಕ್ರಮವೇನು?*

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಹೌದು.

ಆ) ಗುತ್ತಿಗೆದಾರರಿಗೆ ಎಚ್ಚರಿಸಿದೆ.

ಇ) ಕಾಮಗಾರಿಯನ್ನು ಜನವರಿ 98ರಲ್ಲಿ ಪ್ರಾರಂಭಿಸಿದ್ದು 18 ತಿಂಗಳ ಒಳಗಾಗಿಯೇ ಮುಗಿಸಲು ಆದಷ್ಟು ಪ್ರಯತ್ನ ಮಾಡಲಾಗುವುದು.

ಈ) ನಿಯಮಾವಳಿ ಪ್ರಕಾರ ವಿಳಂಬಕ್ಕೆ ಕಾರಣರಾದವರ ಮೇಲೆ ಕ್ರಮ ಕೈಗೊಳ್ಳಲಾಗುವುದು.

ರಾಜ್ಯದಲ್ಲಿನ ಕುಟುಂಬ ನ್ಯಾಯಾಲಯಗಳು

486 - ಶ್ರೀ ಎಸ್. ಸುರೇಶ್ ಕುಮಾರ್ (ರಾಜಾಜಿನಗರ) : ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿರುವ ಕುಟುಂಬ ನ್ಯಾಯಾಲಯಗಳ ಸಂಖ್ಯೆ ಎಷ್ಟು?*

ಆ) *ಕಳೆದ 3 ವರ್ಷಗಳಲ್ಲಿ ಪ್ರತಿ ವರ್ಷ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು? ಆ ಪೈಕಿ ಪ್ರಕರಣಗಳ ಸಂಖ್ಯೆ ಎಷ್ಟು?*

ಇ) *ಖಾಲಿ ಇರುವ ನ್ಯಾಯಾಧೀಶರ ಸಂಖ್ಯೆ ಎಷ್ಟು?*

ಈ) *ಸದರಿ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಯೋಜನೆಯನ್ನೇನಾದರೂ ಹಮ್ಮಿಕೊಳ್ಳಲಾಗಿದೆಯೇ?*

ಶ್ರೀ ಎಂ.ಸಿ. ನಾಣಯ್ಯ (ಕಾನೂನು, ಸಂಸದೀಯ ವ್ಯವಹಾರಗಳು ವಾರ್ತಾ ಮತ್ತು ಪ್ರಚಾರ ಸಚಿವರು):

ಅ) ರಾಜ್ಯದಲ್ಲಿ 9 ಕುಟುಂಬ ನ್ಯಾಯಾಲಯಗಳಿವೆ.